# ಕರ್ನಾಟಕ ಲೋಕಾಯುಕ್ತ

ಸಂಖ್ಯೆ: ಕಂಪ್ಲೆಂಟ್/ಉಪಲೋಕ್/ಬಿಡಿ.32/2017/ಸನಿಕಾಸ-2

ಬಹುಮಹಡಿಗಳ ಕಟ್ಟಡ,
ಡಾ॥ಬಿ.ಆರ್.ಅಂಬೇಡ್ಕರ್ ವೀಧಿ,
ಬೆಂಗಳೂರು, ದಿನಾಂಕ: 10.5.2017.

## ಕರ್ನಾಟಕ ಲೋಕಾಯುಕ್ತ ಕಾಯಿದೆ 1984ರ ಕಲಂ 12(1)ರ ಅನ್ವಯ ವರದಿ

**ವಿಷಯ:-** ತುಮಕೂರಿನ ಮಧುಗಿರಿ ಪುರಸಭೆಯ ವ್ಯಾಪ್ತಿಗೆ ಒಳಪಡುವ ಸ್ಥಳದಲ್ಲಿ ನಿರ್ಮಿಸುತ್ತಿರುವ ಅನಧಿಕೃತ ಕಟ್ಟಡಗಳನ್ನು ತೆರವುಗೊಳಿಸಿ ಈ ಜಾಗೆಯನ್ನು ಪುರಸಭೆಯ ಸ್ವಾಧೀನಕ್ಕೆ ಪಡೆಯಲು ಸೂಕ್ತ ಕ್ರಮಕೈಗೊಳ್ಳಲು ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು ಕೋರಿ.

*******

ಶ್ರೀ ಎಂ.ವೈ.ಶಿವಕುಮಾರ್, ಕೆ.ಆರ್.ಬಡಾವಣೆ, ಮಧುಗಿರಿ, ತುಮಕೂರು ಜಿಲ್ಲೆ, (ಇನ್ನು ಮುಂದೆ "ದೂರುದಾರರು" ಎಂದು ಕರೆಯಲ್ಪಡುತ್ತಾರೆ) ತಮ್ಮ ದೂರಿನಲ್ಲಿ (1) ಶ್ರೀ ಜಿ.ನವೀನ್ ಚಂದ್ರ, ಮುಖ್ಯಾಧಿಕಾರಿಗಳು, ಮಧುಗಿರಿ ಪುರಸಭೆ, ತುಮಕೂರು ಜಿಲ್ಲೆ, (ಇನ್ನು ಮುಂದೆ ಎದುರುದಾರರು ಎಂದು ಕರೆಯಲ್ಪಡುತ್ತಾರೆ) ರವರ ವಿರುದ್ಧ ನೀಡಿದ ದೂರನ್ನು, ಕರ್ನಾಟಕ ಲೋಕಾಯುಕ್ತ ಕಾಯಿದೆಯ ಕಲಂ 9ರ ಅಡಿಯಲ್ಲಿ ತನಿಖೆಗೆ ತೆಗೆದುಕೊಳ್ಳಲಾಗಿದೆ.

2. **ದೂರಿನ ಸಂಕ್ಷಿಪ್ತ ವಿವರಣೆ:-**

ದೂರುದಾರರು ತಮ್ಮ ದೂರಿನಲ್ಲಿ ತುಮಕೂರು ಜಿಲ್ಲೆಯ ಮಧುಗಿರಿ ಪಟ್ಟಣದಲ್ಲಿ ಪುರಸಭೆಯಿಂದ ಕಟ್ಟಡ ಪರವಾನಿಗೆ ಪಡೆಯದೆ ಹಲವಾರು ಬಹುಮಹಡಿ ಕಟ್ಟಡಗಳನ್ನು ಅಕ್ರಮವಾಗಿ ನಿರ್ಮಾಣ ಮಾಡುತ್ತಿದ್ದು, ಅದನ್ನು ತಡೆಯುವಲ್ಲಿ ಎದುರುದಾರರು ವಿಫಲರಾಗಿರುತ್ತಾರೆ. ಇದರಿಂದ ಸರ್ಕಾರಕ್ಕೆ ಲಕ್ಷಾಂತರ ರೂಪಾಯಿಗಳ ವಂಚನೆಯಾಗುತ್ತಿದ್ದು, ಈ ಅಕ್ರಮ ಕಟ್ಟಡಗಳನ್ನು ತಡೆದು ಎದುರುದಾರರ ವಿರುದ್ಧ ಸೂಕ್ತ ಕ್ರಮಕೈಗೊಳ್ಳಬೇಕೆಂದು ಕೋರಿ ದೂರು ಸಲ್ಲಿಸಿದ್ದಾರೆ. ಅಕ್ರಮ ಕಟ್ಟಡಗಳು ಈ ಕೆಳಗಿನಂತಿವೆ.

1. ರಾಘವೇಂದ್ರ ನರ್ಸಿಂಗ್ ಹೋಂ, ತುಮಕೂರು ಗೇಟ್.
2. ರಾಘವೇಂದ್ರ ಬಡಾವಣೆಯಲ್ಲಿ ರಾಘವೇಂದ್ರ ನರ್ಸಿಂಗ್ ಹಾಸ್ಟೆಲ್ ಪಕ್ಕದ ಸಾರ್ವಜನಿಕ ಉದ್ಯಾನವನದ ಜಾಗದಲ್ಲಿ ನಿರ್ಮಾಣವಾಗುತ್ತಿರುವ ಕಟ್ಟಡ.
3. ತುಮಕೂರು ಗೇಟ್ ಅಂಚೆಕಛೇರಿ ಪಕ್ಕದ ಕಟ್ಟಡ.

4. ಸಾರ್ವಜನಿಕ ಆಸ್ಪತ್ರೆ ಪಕ್ಕದಲ್ಲಿ ಪುರಾತತ್ವ ಇಲಾಖೆ ವ್ಯಾಪ್ತಿಗೆ ಒಳಪಡುವ ಸ್ಥಳದಲ್ಲಿ ನಿರ್ಮಿಸುತ್ತಿರುವ ಕಟ್ಟಡ.

3. ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಈಗಾಗಲೇ ದೂರಿನಲ್ಲಿ ನಮೂದಿಸಿರುವ ಅನಧಿಕೃತ ಕಟ್ಟಡಗಳ ಖಾತೆದಾರರು ಕಟ್ಟಡ ನಿರ್ಮಾಣಕ್ಕೆ ಪರವಾನಿಗೆ ಪಡೆಯದೆ ನಿರ್ಮಾಣ ಮಾಡುತ್ತಿರುವುದು ಕಂಡುಬಂದಿರುವುದರಿಂದ ಕಟ್ಟಡ ನಿರ್ಮಾಣ ಮಾಡದಂತೆ ತಿಳುವಳಿಕೆ ಪತ್ರ ನೀಡಲಾಗಿದೆ. ಆಗ ಖಾತೆದಾರರು ಕಟ್ಟಡ ಪರವಾನಿಗೆ ನೀಡಲು ಅರ್ಜಿ ಸಲ್ಲಿಸಿರುತ್ತಾರೆ. ನಗರ ಮತ್ತು ಯೋಜನಾ ನಿರ್ದೇಶಕರ ಕಛೇರಿ ಕರ್ನಾಟಕ ಸರ್ಕಾರ ಅವರ ಪತ್ರದ ಸಂಖ್ಯೆ:ನಗ್ರಾಯೋನಿ/ಕಟ್ಟಡ ಪರವಾನಿಗೆ/ಸುತ್ತೋಲೆ/2015-16 ದಿ.22.1.2016ರ ಪತ್ರದಂತೆ ಸ್ಥಳೀಯ ಸಂಸ್ಥೆಗಳಲ್ಲಿ ಈಗಾಗಲೇ ಖಾತೆ ತೆರೆದಿರುವ ಸ್ವತ್ತುಗಳಿಗೆ ಸಂಬಂಧಿಸಿದಂತೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆಯನ್ವಯ ಪ್ರಾಧಿಕಾರ ರಚನೆಯ ಪೂರ್ವದಲ್ಲಿ ಮತ್ತು ನಂತರ ಭೂಪರಿವರ್ತನೆಯಾದ ಜಮೀನುಗಳನ್ನು ಸಂಬಂಧಪಟ್ಟ ಪ್ರಾಧಿಕಾರಗಳಿಂದ ವಿನ್ಯಾಸ ನಕ್ಷೆ ಅನುಮೋದನೆ ಪಡೆಯದೆ ಅನಧಿಕೃತವಾಗಿ ವಿಭಜಿಸಿ ಸ್ಥಳೀಯ ಸಂಸ್ಥೆಯಲ್ಲಿ ಖಾತೆ ತೆರೆದಿರುವ ನಿವೇಶನಗಳಿಗೆ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ತಾಂತ್ರಿಕ ಅಭಿಪ್ರಾಯವನ್ನು ನೀಡುವುದು ಸಮಂಜಸವಲ್ಲದ ಕಾರಣ ಇಂತಹ ನಿವೇಶನಗಳಲ್ಲಿ ಕಟ್ಟಡ ನಿರ್ಮಾಣ ಮಾಡುವ ಸಂಬಂಧ ಪರವಾನಿಗೆ ನೀಡಲು ತಾಂತ್ರಿಕ ಅಭಿಪ್ರಾಯವನ್ನು ನೀಡಬಾರದೆಂದು ಸ್ಥಳೀಯ ಯೋಜನಾ ಪ್ರಾಧಿಕಾರ, ಮಧುಗಿರಿ, ದೂರಿನಲ್ಲಿ ನಮೂದಿಸಿರುವ ಕಟ್ಟಡಗಳ ಪರವಾನಿಗೆ ನೀಡಲು ತಿರಸ್ಕರಿಸಿರುತ್ತಾರೆ. ಆದ್ದರಿಂದ ಮೂಲಭೂತ ಸೌಕರ್ಯ ಕಲ್ಪಿಸಬೇಕಾಗಿರುವುದರಿಂದ ಪುರಸಭೆ ಕಾಯ್ದೆ 1964 ಕಲಂ.107ರ ಪ್ರಕಾರ ದಂಡ ಪಾವತಿಸಿಕೊಳ್ಳಲು ಕ್ರಮಕೈಗೊಳ್ಳಲಾಗುವುದೆಂದು ತಿಳಿಸಿರುತ್ತಾರೆ.

4. ದೂರುದಾರರು ತಮ್ಮ ಪ್ರತ್ಯುತ್ತರದಲ್ಲಿ ದೂರಿನ ಅಂಶಗಳನ್ನು ಪುನರುಚ್ಚರಿಸಿದ್ದಾರೆ.

5. ದೂರುದಾರರು ಹಾಜರುಪಡಿಸಿದ ದೂರು ಮತ್ತು ದಾಖಲಾತಿಗಳು, ಆಕ್ಷೇಪಣೆ, ಪ್ರತ್ಯುತ್ತರ ಮತ್ತು ದಾಖಲಾತಿಗಳನ್ನು ಪರಿಶೀಲಿಸಿದಾಗ, ದೂರಿನಲ್ಲಿ ನಮೂದಿಸಿರುವ 4 ಕಟ್ಟಡಗಳನ್ನು ಅಕ್ರಮವಾಗಿ ನಿರ್ಮಿಸಲಾಗಿದೆಯೆನ್ನುವುದನ್ನು ಎದುರುದಾರರು ಆಕ್ಷೇಪಣೆಯಲ್ಲಿ ಒಪ್ಪಿಕೊಂಡಿರುತ್ತಾರೆ. ಆದರೆ ಈ ಅನಧಿಕೃತ ಕಟ್ಟಡಗಳನ್ನು ತಡೆಯುವಲ್ಲಿ ಎದುರುದಾರರು ವಿಫಲರಾಗಿದ್ದಾರೆಂದು ಕಂಡುಬರುತ್ತದೆ. ಏಕೆಂದರೆ ಅಕ್ರಮ ಕಟ್ಟಡಗಳನ್ನು ತೆರವುಗೊಳಿಸುವ ಬಗ್ಗೆ ಯಾವುದೇ ಕ್ರಮಕೈಗೊಳ್ಳದೇ,

2

ಬದಲಾಗಿ ಅವುಗಳಿಗೆ ದಂಡ ವಿಧಿಸಿ ಸಕ್ರಮಗೊಳಿಸಲು ಹೊರಟಿದ್ದಾರೆಂದು ಕಂಡುಬರುತ್ತದೆ. ಸರ್ಕಾರದ ಸುತ್ತೋಲೆ ಪ್ರಕಾರ ಇಂತಹ ಅಕ್ರಮ ಕಟ್ಟಡಗಳ ಬಗ್ಗೆ ತಾಂತ್ರಿಕ ಅಭಿಪ್ರಾಯ ನೀಡಬಾರದೆಂದು ಹಾಗೂ ಇವುಗಳಿಗೆ ಪರವಾನಿಗೆ ನೀಡಲು ಸಹ ನಗರ ಯೋಜನಾ ಪ್ರಾಧಿಕಾರ ತಿರಸ್ಕರಿಸಿರುತ್ತದೆ.

6. ದೂರುದಾರರು ಈ ಪೂರ್ವದಲ್ಲಿಯೇ ಇಂತಹ ಅಕ್ರಮ ಕಟ್ಟಡಗಳ ಬಗ್ಗೆ ಎದುರುದಾರರ ಗಮನಕ್ಕೆ ತಂದಿದ್ದು, ಆದರೂ ಸಹಾ ಅಂತಹ ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳದಿರುವುದು ಕಂಡುಬರುತ್ತದೆ. ಸಾರ್ವಜನಿಕ ಉದ್ಯಾನವನದ ಜಾಗದಲ್ಲಿ ಕಟ್ಟಡ ನಿರ್ಮಾಣದ ಬಗ್ಗೆ ಎದುರುದಾರರು ತಮ್ಮ ಆಕ್ಷೇಪಣೆಯಲ್ಲಿ ಉಲ್ಲೇಖಿಸಿದ್ದೇನೆಂದರೆ ದಿ.14.4.1990ರಲ್ಲಿ ಆಗಿನ ಮುಖ್ಯಾಧಿಕಾರಿಗಳು ನೋಂದಣಿ ಮಾಡಿರುತ್ತಾರೆ. ಆದರೆ ಈ ಜಾಗವನ್ನು ಹಿಂಪಡೆಯಲು ಉಪವಿಭಾಗಾಧಿಕಾರಿಗಳು, ಮಧುಗಿರಿ, ಅವರಿಗೆ ಪತ್ರ ಬರೆಯಲಾಗಿರುತ್ತದೆ. ಎದುರುದಾರರು ಈ ಅಕ್ರಮ ಕಟ್ಟಡಗಳನ್ನು ತಡೆಯುವ ಬಗ್ಗೆ ತುರ್ತು ಕ್ರಮಕೈಗೊಳ್ಳದೆ ಕೇವಲ 2-3 ಬಾರಿ ತಿಳುವಳಿಕೆ ಪತ್ರ ನೀಡುತ್ತಾ ಕಾಲಹರಣ ಮಾಡಿದ್ದಾರೆಂದು ಕಂಡುಬರುತ್ತದೆ. ಆದ್ದರಿಂದ ಎದುರುದಾರರು ತಮ್ಮ ಅಧಿಕಾರ ವ್ಯಾಪ್ತಿಯಲ್ಲಿರುವ ಪ್ರದೇಶದಲ್ಲಿ ಅಕ್ರಮ ಕಟ್ಟಡಗಳು ನಡೆಯುತ್ತಿದ್ದರೂ ಸಹಾ ಪರಿಣಾಮಕಾರಿ ಕ್ರಮಕೈಗೊಳ್ಳದೇ, ಹಾಗೂ ಅಕ್ರಮ ಕಟ್ಟಡಗಳನ್ನು ತಡೆಯುವಲ್ಲಿ ವಿಫಲರಾಗಿದ್ದಾರೆಂದು ಕಂಡುಬರುತ್ತದೆ.

7. ಆದ್ದರಿಂದ, ಕರ್ನಾಟಕ ಲೋಕಾಯುಕ್ತ ಕಾಯ್ದೆಯ ಕಲಂ 12(1)ರಡಿಯಲ್ಲಿ ಪ್ರದತ್ತವಾದ ಅಧಿಕಾರದಡಿಯಲ್ಲಿ, ದೂರಿನಲ್ಲಿ ಉಲ್ಲೇಖಿಸಿರುವ (1) ರಾಘವೇಂದ್ರ ನರ್ಸಿಂಗ್ ಹೋಂ, ತುಮಕೂರು ಗೇಟ್, (2) ರಾಘವೇಂದ್ರ ಬಡಾವಣೆಯಲ್ಲಿ ರಾಘವೇಂದ್ರ ನರ್ಸಿಂಗ್ ಹಾಸ್ಟೆಲ್ ಪಕ್ಕದ ಸಾರ್ವಜನಿಕ ಉದ್ಯಾನವನದ ಜಾಗದಲ್ಲಿ ನಿರ್ಮಾಣವಾಗುತ್ತಿರುವ ಕಟ್ಟಡ, (3) ತುಮಕೂರು ಗೇಟ್ ಅಂಚೆಕಛೇರಿ ಪಕ್ಕದ ಕಟ್ಟಡ(4) ಸಾರ್ವಜನಿಕ ಆಸ್ಪತ್ರೆ ಪಕ್ಕದಲ್ಲಿ ಪುರಾತತ್ವ ಇಲಾಖೆ ವ್ಯಾಪ್ತಿಗೆ ಒಳಪಡುವ ಸ್ಥಳದಲ್ಲಿ ನಿರ್ಮಿಸುತ್ತಿರುವ ಕಟ್ಟಡ,ಇವುಗಳನ್ನು ತೆರವುಗೊಳಿಸಿ ಈ ಜಾಗೆಯನ್ನು ನಿಯಮಾನುಸಾರ ಪುರಸಭೆಯ ಸ್ವಾಧೀನಕ್ಕೆ ಪಡೆಯಲು **ಸೂಕ್ತ ಕ್ರಮಕೈಗೊಳ್ಳುವಂತೆ ಸಂಬಂಧಪಟ್ಟವರಿಗೆ ನಿರ್ದೇಶನ ನೀಡಲು** ಸಕ್ಷಮ ಪ್ರಾಧಿಕಾರಕ್ಕೆ ಶಿಫಾರಸ್ಸು ಮಾಡಲಾಗಿದೆ.

Sd/-

8. ಹಾಗೆಯೇ, ಕರ್ನಾಟಕ ಲೋಕಾಯುಕ್ತ ಕಾಯಿದೆ 1984 ಕಲಂ 12(2)ರ ಪ್ರಕಾರ ಸಕ್ಷಮ ಪ್ರಾಧಿಕಾರವು, ಈ ವರದಿಯ ಮೇಲೆ ಏನು ಕ್ರಮ ಕೈಗೊಂಡಿದೆ ಅಥವಾ ಏನು ಕ್ರಮ ಕೈಗೊಳ್ಳಲಾಗುತ್ತದೆ ಎಂಬುದರ ಬಗ್ಗೆ ಈ ವರದಿಯನ್ನು ಸ್ವೀಕರಿಸಿದ ಒಂದು ತಿಂಗಳೊಳಗೆ ವರದಿ ಸಲ್ಲಿಸಲು ಕೋರಲಾಗಿದೆ.

ಸಂಬಂಧಪಟ್ಟ ದಾಖಲೆಗಳನ್ನು ಲಗತ್ತಿಸಿದೆ.

10/5/17

**[ ನ್ಯಾಯಮೂರ್ತಿ ಸುಭಾಷ್ ಬಿ ಅಡಿ]**
**ಉಪಲೋಕಾಯುಕ್ತರು,**
**ಕರ್ನಾಟಕ ರಾಜ್ಯ.**

10/5